24/11/2019

## ರಮೇಶ್ ಜಾರಕಿಹೊಳಿ ಗೆಲುವು ಸಾಧಿಸಿದರೆ ಮಾತ್ರ ನನಗೆ ನೆಮ್ಮದಿ: ಯಡಿಯೂರಪ್ಪ

# ಅನರ್ಹರಿಂದಲೇ ನಾನು ಮುಖ್ಯಮಂತ್ರಿ

**ವಿಶ್ವವಾಣಿ ಸುದ್ದಿಮನೆ** ಗೋಕಾಕ

ಲಿಂಗಾಯತ ಸಮುದಾಯದ ಬಿ.ಎಸ್. ಯಡಿಯೂರಪ್ಪ ಅವರನ್ನು ಸಿಎಂ ಮಾಡಲು ಸಹಕಾರ ನೀಡಿರುವ ರಮೇಶ್ ಜಾರಕಿಹೊಳಿಗೆ ಗೋಕಾಕ ಕ್ಷೇತ್ರದ ಎಲ್ಲ ಲಿಂಗಾಯತ ಮತಗಳು ನೀಡಬೇಕು ಎಂದು ಸಿಎಂ ಬಿ.ಎಸ್.ಯಡಿಯೂರಪ್ಪ ಹೇಳಿದರು.

ಗೋಕಾಕ ಮತಕ್ಷೇತ್ರದ ಬಿಜೆಪಿ ಅಭ್ಯರ್ಥಿ ರಮೇಶ್ ಜಾರಕಿಹೊಳಿ ಪರವಾಗಿ ಆಯೋಜಿಸಿದ್ದ ಸಾರ್ವಜನಿಕ ಪ್ರಚಾರ ಸಭೆಯಲ್ಲಿ ಮಾತನಾಡಿ, ರಮೇಶ್ ಜಾರಕಿಹೊಳಿ ನೇತೃತ್ವದಲ್ಲಿ ಹದಿನೇಳು ಶಾಸಕರು ಹೋರಾಟ ಮಾಡದಿದ್ದರೆ ಇವತ್ತು ಯಡಿಯೂರಪ್ಪ ಮುಖ್ಯಮಂತ್ರಿಯಾಗುತ್ತಿರಲಿಲ್ಲ. ಹದಿನೇಳು ಜನ ಶಾಸಕರ ರಾಜೀನಾಮೆ ನೀಡಿಸಿ ಮುಂಬೈನಲ್ಲಿ ಅಜ್ಞಾತವಾಸ ಅನುಭವಿಸಿದ ರಮೇಶ್ ಜಾರಕಿಹೊಳಿ ಅವರ ಋಣ ತೀರಿಸಬೇಕಾದರೆ ಒಂದು ಲಕ್ಷ ಅಧಿಕ ಮತಗಳಿಂದ ರಮೇಶ್ ಜಾರಕಿಹೊಳಿ ಗೆಲುವು ಸಾಧಿಸಿದಾಗ ಮಾತ್ರ ನನಗೆ ನೆಮ್ಮದಿ ತರುತ್ತದೆ ಎಂದು ತಿಳಿಸಿದರು.

ಬಿಜೆಪಿ ಸರಕಾರ ಅಧಿಕಾರಕ್ಕೆ ಬರಲು ಕಾರಣರಾಗಿರುವ ಹದಿನೈದು ಶಾಸಕರ ಗೆಲುವಿಗೆ ಎಲ್ಲ ರೀತಿಯ ಸಹಕಾರ ನೀಡುವುದು ನಮ್ಮ ಕರ್ತವ್ಯ ಎಂದು ಭಾವಿಸಿದ್ದೇನೆ.



ಸಾರ್ವಜನಿಕ ಪ್ರಚಾರ ಸಭೆಯನ್ನು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಉದ್ಘಾಟಿಸಿದರು. ಕೇಂದ್ರ ಸಚಿವ ಸುರೇಶ ಅಂಗಡಿ, ರಾಜ್ಯಸಭಾ ಸದಸ್ಯ ಪ್ರಭಾಕರ್ ಕೋರೆ, ರಾಜ್ಯ ಸಚಿವರಾದ ಜಗದೀಶ್ ಶೆಟ್ಟರ್, ಕೆ.ಎಸ್.ಈಶ್ವರಪ್ಪ, ಶಶಿಕಲಾ ಜೊಲ್ಲೆ, ಶಾಸಕರಾದ ಅಭಯ ಪಾಟೀಲ, ಉಮೇಶ ಕತ್ತಿ ಇದ್ದರು.

## ಬಿಜೆಪಿ ಗೆಲುವಿನ ಪರ್ವ ಆರಂಭ

ಗೋಕಾಕ ಕ್ಷೇತ್ರದಲ್ಲಿ ಇಲ್ಲಿವರೆಗೂ ಬಿಜೆಪಿ ಅಭ್ಯರ್ಥಿ ಗೆಲುವು ಸಾಧಿಸಿರಲ್ಲಿಲ್ಲ. ಈಗ ಬಿಜೆಪಿ ಗೆಲುವಿನ ಪರ್ವ ಆರಂಭವಾಗುತ್ತಿದೆ ಎಂದು ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ಸುರೇಶ್ ಅಂಗಡಿ ಹೇಳಿದರು. ಪ್ರಚಾರ ಸಭೆಯಲ್ಲಿ ಭಾಗವಹಿಸಿ ಮಾತನಾಡಿ, ಗೋಕಾಕದಲ್ಲಿ ಬಿಜೆಪಿ ಶಾಸಕರ ಆಯ್ಕೆಗೋಸ್ಕರ ಬಿಜೆಪಿ ರಾಷ್ಟ್ರಾಧ್ಯಕ್ಷ ಅಮಿತ್ ಶಾ ರೋಡ್ ಶೋ ನಡೆಸಿದರು. ಸಿಎಂ ಬಿಎಸ್‌ವೈ ಬಹಿರಂಗ ಸಭೆ ನಡೆಸಿದರೂ ಯಾವುದೇ ಪ್ರಯೋಜವಾಗಿರಲ್ಲಿಲ್ಲ. ಆದರೆ ಈ ಬಾರಿಯ ಉಪಚುನಾವಣೆಯಲ್ಲಿ ಅತೀ ಹೆಚ್ಚು ಮತಗಳಿಂದ ರಮೇಶ್ ಗೆಲುವು ಸಾಧಿಸುವುದರ ಮೂಲಕ ಗೋಕಾಕದಲ್ಲಿ ಕಮಲ ಅರಳಲಿದೆ ಎಂದರು.

- 15 ಶಾಸಕರ ಗೆಲುವಿಗೆ ಸಹಕಾರ ನೀಡುವುದು ನಮ್ಮ ಕರ್ತವ್ಯ
- ರಮೇಶ್‌ಗೆ ಲಿಂಗಾಯತ ಮತಗಳು ನೀಡಿ
- ನಾನು ಐಷಾರಾಮಿ ಹೋಟೆಲ್‌ನಲ್ಲಿ ಕುಳಿತು ರಾಜಕಾರಣ ಮಾಡುವ ವ್ಯಕ್ತಿಯಲ್ಲ

ಶಾಸಕ ಬಾಲಚಂದ್ರ ಜಾರಕಿಹೊಳಿ ರಾತ್ರಿ 12 ಗಂಟೆಗೆ ಮನಗೆ ಬಂದು ಕೆಎಂಎಫ್ ಅಧ್ಯಕ್ಷನಾಗಬೇಕು ಎಂದು ತಿಳಿಸಿದಾಗ ನಾನು ಕಣ್ಣು ಮುಚ್ಚಿ ಕಡತಕ್ಕೆ ಸಹಿ ಮಾಡಿದೆ. ಅದರ ಪರಿಣಾಮ ಇಂದು ಬಾಲಚಂದ್ರ ಜಾರಕಿಹೊಳಿ ಕೆಎಂಎಫ್ ಅಧ್ಯಕ್ಷರಾಗಿದ್ದಾರೆ. ಹಾಲು ಉತ್ಪಾದಕರ ಉತ್ತೇಜನ ನೀಡುವ ನಿಟ್ಟಿನಲ್ಲಿ ಸರಕಾರ ಅವರೊಂದಿಗಿದೆ.

-ಬಿ.ಎಸ್.ಯಡಿಯೂರಪ್ಪ
ಮುಖ್ಯಮಂತ್ರಿ

ರಾಜ್ಯದಲ್ಲಿ ನಡೆದಿರುವ ಉಪಚುನಾವಣೆಯಲ್ಲಿ ಶಿವಾಜಿ ನಗರ ಸೇರಿದಂತೆ ಹದಿನೈದು ಕ್ಷೇತ್ರದಲ್ಲಿ ಬಿಜೆಪಿ ಗೆಲವು ಸಾಧಿಸಲ್ಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

## ಸ್ಸವದಿ ಡಿಸಿಎಂ ಆಗಿ ಮುಂದುವರಿಯಲಿದ್ದಾರೆ

ಬೆಳಗಾವಿ: ಡಿಸಿಎಂ ಲಕ್ಷ್ಮಣ ಸವದಿ, ಮುಂದಿನ ಮೂರು ವರ್ಷಗಳವರೆಗೂ ಉಪಮುಖ್ಯಮಂತ್ರಿಯಾಗಿ, ಸಚಿವರಾಗಿ ಮುಂದುವರಿಯಲಿದ್ದಾರೆ. ಯಾರಿಗೂ ಅನುಮಾನ ಬೇಡ ಎಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಹೇಳಿದರು. ಸುದ್ದಿಗಾರರೊಂದಿಗೆ ಮಾತನಾಡಿ, ಸವದಿಯವರಿಗೆ ತೊಂದರೆಯಾಗುತ್ತದೆ ಎಂದು ಇಲ್ಲಿನ ಮತದಾರರು ಯೋಚಿಸಿದ್ದರೆ ಅದಕ್ಕೆ ಅರ್ಥವಿಲ್ಲ. ಪಕ್ಷದ ರಾಷ್ಟ್ರೀಯ ಅಧ್ಯಕ್ಷರೇ ಅವರಿಗೆ ಭರವಸೆ ನೀಡಿದ್ದಾರೆ. ಸರಕಾರದ ಪೂರ್ಣಾವಧಿಯವರೆಗೂ ಅವರು ಮುಂದುವರಿಯುತ್ತಾರೆ ಎಂದರು. ಸವದಿಯವರ ಸಹಕಾರದೊಂದಿಗೆ ಅಥಣಿ ಹಾಗೂ ಕಾಗವಾಡ ಎರಡೂ ಕ್ಷೇತ್ರಗಳಲ್ಲಿ ಪಕ್ಷ ಗೆಲ್ಲಲಿದೆ. ಸವದಿ ಅವರ ಗೌರವದ ಪ್ರಶ್ನೆಯಾಗಿದೆ. ಕ್ಷೇತ್ರದಲ್ಲಿ ಆರಂಭದಲ್ಲಿ ಸ್ವಲ್ಪ ಗೊಂದಲ ಇತ್ತು. ಅದನ್ನು ಸವದಿಯವರು ಬಗೆಹರಿಸಿದ್ದಾರೆ. ಈಗ ಯಾವುದೇ ಗೊಂದಲಗಳಿಲ್ಲ. ಪಕ್ಷದ ಎಲ್ಲ ಕಾರ್ಯಕರ್ತರು ಒಗ್ಗಟ್ಟಾಗಿ ಅಭ್ಯರ್ಥಿಯನ್ನು ಗೆಲ್ಲಿಸಿಕೊಂಡು ಬರಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಸರಕಾರದಲ್ಲಿ ಹಣದ ಕೊರತೆ ಇಲ್ಲ. ನಾನು ಐಷಾರಾಮಿ ಹೋಟೆಲ್‌ನಲ್ಲಿ ಕುಳಿತು ರಾಜಕಾರಣ ಮಾಡುವ ವ್ಯಕ್ತಿಯಲ್ಲ. ಗೋಕಾಕ ಕ್ಷೇತ್ರದ ಅಭಿವೃದ್ಧಿ ಮಾಡಲಾಗುವುದು. ಅಭಿವೃದ್ಧಿ ಕಾರ್ಯಗಳ ಪಟ್ಟಿ ನೀಡಿದರೆ ಗೋಕಾಕ ಕ್ಷೇತ್ರವನ್ನು ಮಾದರಿ ಕ್ಷೇತ್ರವನ್ನಾಗಿಸಲು ಬದ್ಧನಿದ್ದೇನೆ. ಚುನಾವಣೆ ಮುಗಿದ ಬಳಿಕ ನೀರಾವರಿ ಯೋಜನೆಗಳು ಸೇರಿದಂತೆ ಎಲ್ಲ ಕೆಲಸಗಳನ್ನು ಆರಂಭಿಸಲಾಗುವುದು ಎಂದರು.

ಈ ಹಿಂದೆ ಬಿಜೆಪಿ ಸರಕಾರ ಅಧಿಕಾರದಲ್ಲಿದ್ದಾಗ ಭಾಗ್ಯಲಕ್ಷ್ಮೀ, ರೈತರಿಗೆ ಶೂನ್ಯ ಬಡ್ಡಿದರಲ್ಲಿ ಸಾಲ ವಿತರಣೆ, ಶಾಲಾ ವಿದ್ಯಾರ್ಥಿಗಳಿಗೆ ಸೈಕಲ್ ವಿತರಣೆ ಸೇರಿದಂತೆ ಅನೇಕ ಯೋಜನೆಗಳನ್ನು ಜಾರಿಗೆ ತರಲಾಗಿದೆ. ರಾಜ್ಯದ ಸಮಗ್ರ ಅಭಿವೃದ್ಧಿಗೆ ಬಿಜೆಪಿ ಬದ್ಧ. ನಾನು ಎಂದು ಜಾತಿವಾದ ಮಾಡಿದ ವ್ಯಕ್ತಿಯಲ್ಲ. ಎಲ್ಲ ಸಮಾಜ, ಎಲ್ಲ ವರ್ಗಗಳ ಅಭಿವೃದ್ಧಿಯನ್ನು ಬಯಸಿದವನು. ಕೃಷಿಕರು, ದೀನದಲಿತರು ಸೇರಿದಂತೆ ಎಲ್ಲರನ್ನೂ ಸಮಾಜಮುಖಿಗೆ ತರಲು ಸರಕಾರ ಸಿದ್ಧವಿದೆ ಎಂದು ಹೇಳಿದರು.